ಮೂಲಕ ಕಿರು ಉದ್ದಿಮೆದಾರರ ಸಮಾಲೋಚಕತನ್ನು ನೇಮಿಸಿ ಕಿರು ಉದ್ಯಮಗಳನ್ನು ಸ್ಥಾಪಿಸಲು ನೆರವು ನೀಡಲಾಗುತ್ತಿದೆ.

ಸಂಪನ್ಮೂಲ ತಾಲ್ಲೂಕುಗಳ ಕಾರ್ಯತಂತ್ರ ರಾಜ್ಯದಲ್ಲಿ ಪಾವಗಡ, ಪುಂಡಹಗಿ ಹಾಗೂ ಕುಷ್ಟಗಿ ತಾಲ್ಲೂಕುಗಳಲ್ಲಿ ಆಂಧ್ರಪ್ರದೇಶ ಸರ್ಕಾರದ ಸರ್ಫ್ ಸಂಸ್ಥೆಯ ಸಹಭಾಗಿತ್ವದಲ್ಲಿ ಸಮುದಾಯ ಸಂಪನ್ಮೂಲ ವ್ಯಕ್ತಿಗಳ ಸೇವೆಯನ್ನು ಬಳಸಿ ಸ್ವಸಹಾಯ ಗುಂಪುಗಳ ಬಲವರ್ಧನೆ, ಒಕ್ಕೂಟಗಳ ರಚನೆಗಳ ಕಾರ್ಯತಂತ್ರದ ಮೂಲಕ ಸ್ವಸಹಾಯ ಸಂಘಗಳು ಆರ್ಥಿಕ ಚಟುವಟಿಕೆಯನ್ನು ಕೈಗೊಳ್ಳಲು ನೆರವು ನೀಡಲಾಗುತ್ತಿದೆ.

ಆ) ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಯೋಗದೊಂದಿಗೆ ರಾಜ್ಯದಲ್ಲಿ ಸ್ವಚ್ಛ ಭಾರತ್ ಮಿಷನ್‌ನ್ನು ಅನುಷ್ಠಾನ ಮಾಡಲಾಗುತ್ತಿದ್ದು, 2018–19ನೇ ಸಾಲಿನ ಅಂತ್ಯದೊಳಗೆ ರಾಜ್ಯವನ್ನು ಬಯಲು ಬಹಿರ್ದೆಸೆ ಮುಕ್ತ ರಾಜ್ಯವನ್ನಾಗಿ ಪರಾವರ್ತಿಸುವ ಗುರಿ ಹೊಂದಲಾಗಿದೆ.

ಇ) ಗ್ರಾಮೀಣ ಮಹಿಳೆಯರಿಗೆ ಬಯಲು ಬಹಿರ್ದೆಸೆಯಿಂದ ಆಗುವ ದುಷ್ಪರಿಣಾಮಗಳು ಮತ್ತು ಅದರ ನಿಯಂತ್ರಣಕ್ಕೆ ಬರುವ ಸಾಂಕ್ರಾಮಿಕ ರೋಗಗಳು, ಸ್ವಚ್ಛತೆಯ ಮಹತ್ವದ ಬಗ್ಗೆ ಅರಿವು ಮೂಡಿಸಲು ಮಾಹಿತಿ, ಶಿಕ್ಷಣ ಮತ್ತು ಸಂವಹನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಅಪೌಷ್ಟಿಕತೆಯಿಂದ ನರಳುತ್ತಿರುವ ಮಕ್ಕಳು

2500(3422); ಶ್ರೀ ಮಂಜುನಾಥ ಗೌಡ ಕೆ.ಎಸ್

ಅ) ರಾಜ್ಯದಲ್ಲಿ ಅಪೌಷ್ಟಿಕತೆಯಿಂದ ನರಳುತ್ತಿರುವ ಮಕ್ಕಳನ್ನು ಗುರುತಿಸಲಾಗಿದೆಯೇ; ಹಾಗಿದ್ದಲ್ಲಿ, ಅಂತಹ ಮಕ್ಕಳ ಸಂಖ್ಯೆ ಎಷ್ಟು (ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು);

ಆ) ಈ ಮಕ್ಕಳಿಗಾಗಿ ಅನುಷ್ಠಾನಗೊಳಿಸಿರುವ ಕಾರ್ಯಕ್ರಮಗಳೇನು;

ಇ) ಸದರಿ ಹಣ ದುರುಪಯೋಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಅಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ಹಾಗೂ ಇದರಲ್ಲಿ ಭಾಗಿಯಾದವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀಮತಿ ಉಮಾಶ್ರೀ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಹೌದು. ಜನವರಿ–2015ರ ಅಂತ್ಯಕ್ಕೆ 28,640 ತೀವ್ರ ಅಪೌಷ್ಟಿಕ ಮಕ್ಕಳನ್ನು ಗುರುತಿಸಲಾಗಿದೆ.

ಜಿಲ್ಲಾ ಮತ್ತು ತಾಲ್ಲೂಕುವಾರು ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಸರ್ಕಾರವು ಅಪೌಷ್ಟಿಕ ಮಕ್ಕಳಿಗಾಗಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿದೆ:–

1) ತೀವ್ರ ಅಪೌಷ್ಟಿಕ ಮಕ್ಕಳಿಗೆ ಪ್ರತಿ ದಿನ ರೂ. 9.00 ಮೌಲ್ಯದ ಪೂರಕ ಪೌಷ್ಟಿಕ ಆಹಾರವನ್ನು ನೀಡಲಾಗುತ್ತಿದೆ.

2) ತುರ್ತು ಚಿಕಿತ್ಸೆಯ ಅಗತ್ಯವಿರುವ 0–6 ವರ್ಷದ, ಬಡತನ ರೇಖೆಗಿಂತ ಕೆಳಗಿರುವ ಅಂಗನವಾಡಿ ಮಕ್ಕಳಿಗೆ ಬಾಲ ಸಂಜೀವಿನಿ ಯೋಜನೆಯಡಿ ಉಚಿತ ಚಿಕಿತ್ಸೆ ನೀಡಲಾಗುತ್ತಿದೆ. ರಾಜ್ಯಾದ್ಯಂತ 32 ಬಾಲಸಂಜೀವಿನಿ ಆಸ್ಪತ್ರೆಗಳನ್ನು ಗುರುತಿಸಲಾಗಿದೆ. ಈ ಯೋಜನೆಯಡಿ ತುರ್ತು ಚಿಕಿತ್ಸೆಯ ಅವಶ್ಯವಿರುವ ಮಗುವಿಗೆ ಗರಿಷ್ಠ ರೂ. 35,000/– ಹಾಗೂ ನವಜಾತ ಶಿಶು ಆರೈಕೆ ಮತ್ತು ಚಿಕಿತ್ಸೆಗೆ ಪ್ರತಿ ಮಗುವಿಗೆ ಗರಿಷ್ಠ ರೂ. 50,000/– ವೆಚ್ಚ ಭರಿಸಬಹುದಾಗಿದೆ.

3) ತೀವ್ರ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.

4) ರಾಜ್ಯದ ಹಿಂದುಳಿದ ಜಿಲ್ಲೆಗಳಾದ ಕೊಪ್ಪಳ, ಬೀದರ್, ಗುಲ್ಬರ್ಗಾ, ರಾಯಚೂರು ಹಾಗೂ ಯಾದಗಿರಿಗಳಲ್ಲಿರುವ ಸಾಧಾರಣ ಅಪೌಷ್ಟಿಕ ಮಕ್ಕಳಿಗೂ ಸಹ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು ನೀಡಲಾಗುತ್ತಿದೆ.

5) ತೀವ್ರ ಅಪೌಷ್ಟಿಕ ಮಕ್ಕಳ ವೈದ್ಯಕೀಯ ಪೆಚ್ಚ ಯೋಜನೆಯಡಿ ಔಷಧಿ ಹಾಗೂ ಚಿಕಿತ್ಸಾ ಆಹಾರಕ್ಕಾಗಿ (Therapeutic food) ಪ್ರತಿ ವರ್ಷ ಪ್ರತಿ ಮಗುವಿಗೆ ರೂ. 750/-ಗಳನ್ನು ನೀಡಲಾಗುತ್ತಿದೆ.

ಇ) ಬಂದಿದೆ

ಈ) ತೀವ್ರ ಅಪೌಷ್ಟಿಕ ಮಕ್ಕಳಿಗೆ ನೀಡುವ ಹಾಲು ಮತ್ತು ಮೊಟ್ಟೆ ಸರಬರಾಜಿನಲ್ಲಿ ವ್ಯತ್ಯಯವಾಗಿರುವ ಎರಡು ಪ್ರಕರಣಗಳು ಬೆಳಕಿಗೆ ಬಂದಿವೆ.

1. ಕಲ್ಬುರ್ಗಿ ಪಟ್ಟಣದಲ್ಲಿ ಕ್ಷೀರಭಾಗ್ಯ ಯೋಜನೆಗೆ ಸಂಬಂಧಿಸಿದ 4,100 ಕಿ.ಗ್ರಾಂ. ಹಾಲಿನಪುಡಿಯನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿದ ಬಗ್ಗೆ ದಿನಾಂಕ:07.05.2014 ರಂದು ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂ:75/2014 ದಿನಾಂಕ:07.05.2014 ರಲ್ಲಿ ಪ್ರಕರಣ (ಎಫ್ಐಆರ್) ದಾಖಲಿಸಿಕೊಂಡು ತನಿಖೆ ನಡೆಸಿರುತ್ತಾರೆ. ಸದರಿ ಪ್ರಕರಣದ ತನಿಖೆಯಲ್ಲಿ ಯಾವುದೇ ಆರೋಪಿತ ವ್ಯಕ್ತಿಯಾಗಿಲ್ಲವೆಂದೂ ಹಾಗೂ ಸಾಕ್ಷ್ಯಾಧಾರಗಳು ಅಭ್ಯವಾಗಿಲ್ಲವೆಂದೂ ದಿನಾಂಕ:27.06.2014 ರಂದು ಮಾನ್ಯ 3ನೇ ಹೆಚ್ಚುವರಿ ಜೆ.ಎಂ.ಎಫ್.ಸಿ ನ್ಯಾಯಾಲಯ, ಕಲ್ಬುರ್ಗಿ ಇವರಿಗೆ ಪೊಲೀಸ್ ಇಲಾಖೆಯು ವರದಿ (ಚಾರ್ಜ್‌ಶೀಟ್) ಸಲ್ಲಿಸಿದೆ.

2. ಬೀದರ್ ಜಿಲ್ಲೆಯಲ್ಲಿ ತೀವ್ರ ಅಪೌಷ್ಟಿಕ ಹಾಗೂ ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ಮೊಟ್ಟೆಯನ್ನು ವಿತರಿಸದೇ ಇರುವ ಬಗ್ಗೆ ದೂರುಗಳು ಬಂದಿದ್ದು, ಈ ಬಗ್ಗೆ ಜಂಟಿ ಇಲಾಖಾ ತನಿಖೆಯನ್ನು ನಡೆಸಲಾಗಿರುತ್ತದೆ. ವರದಿಯನ್ನು ಪರಿಶೀಲಿಸಲಾಗುತ್ತಿದ್ದು, ಮೊಟ್ಟೆಯನ್ನು ವಿತರಿಸದ

ಅಧಿಕಾರಿಗಳ/ಸಿಬ್ಬಂದಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.

ಗ್ರಾಮ ಸಭೆಗಳ ನಿರ್ಣಯಗಳು

2501(3423); ಶ್ರೀ ಮಂಜುನಾಥ ಗೌಡ ಕೆ.ಎಸ್. (ಮಾಲೂರು)

ಅ) ರಾಜ್ಯದಲ್ಲಿ ಗ್ರಾಮ ಸಭೆಯಲ್ಲಿ ವ್ಯಕ್ತವಾಗುವ ಜನ ಸಾಮಾನ್ಯರ ಭಾವನೆಗಳಿಗೆ ಸ್ಪಂದಿಸಲು ಸರ್ಕಾರ ಹಾಕಿಕೊಂಡ ಕಾರ್ಯಕ್ರಮಗಳೇನು;

ಆ) ಗ್ರಾಮ ಪಂಚಾಯತ್‌ಗಳ ಸಭೆಯಲ್ಲಿ ಸಾರ್ವಜನಿಕರಿಂದ ಬರತಕ್ಕಂತಹ ಮನವಿ ಮತ್ತು ನಿರ್ಣಯಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು;

ಇ) ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್ ಸಭೆಗಳು ತೆಗೆದುಕೊಂಡ ನಿರ್ಣಯಗಳಿಗೆ ಸರ್ಕಾರ ಮಾನ್ಯತೆ ನೀಡುವುದೇ;

ಈ) ಹಾಗಿದ್ದಲ್ಲಿ, ಕೋಲಾರ ಜಿಲ್ಲೆ ಮಾಲೂರು ವಿಧಾನಸಭೆಯ ವ್ಯಾಪ್ತಿಯ ಗ್ರಾಮ ಸಭೆಗಳಲ್ಲಿ ಬಂದಿರುವ ಸಾರ್ವಜನಿಕರ ಕುಂದು ಕೊರತೆಗಳ ಮನವಿಗಳನ್ನು ಇತ್ಯರ್ಥಗೊಂಡಿದೆಯೇ?

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ರಾಜ್ಯದಲ್ಲಿನ ಗ್ರಾಮ ಸಭೆಗಳಲ್ಲಿ ವ್ಯಕ್ತವಾಗುವ ಜನಸಾಮಾನ್ಯರ ಭಾವನೆಗಳಿಗೆ ಸ್ಪಂದಿಸಲು ಸರ್ಕಾರ ಹಾಕಿಕೊಂಡ ಕಾರ್ಯಕ್ರಮಗಳು ಈ ಕೆಳಕಂಡಂತಿದೆ.

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 3–ಎ ರನ್ವಯ ಗ್ರಾಮ ಸಭೆಯು ಕೊನೆಯ ಪಕ್ಷ 6 ತಿಂಗಳಿಗೊಮ್ಮೆ ಸಭೆ ಸೇರಬೇಕಾಗುತ್ತದೆ.

ಗ್ರಾಮ ಸಭೆಯ ಪ್ರತಿಯೊಂದು ಸಭೆಯ ಅಧ್ಯಕ್ಷತೆಯನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಯ ಅಧ್ಯಕ್ಷನು ಮತ್ತು ಅವನ ಗೈರು ಹಾಜರಿಯಲ್ಲಿ ಉಪಾಧ್ಯಕ್ಷನು ಮತ್ತು ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಇವರಿಬ್ಬರ ಗೈರು